ಸಾಕ್ಷಿ ಯನ್ನು ದಿಃ 07.03.2026 ರಂದು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿದ್ದು, ಅವುಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿ, ಅದರಲ್ಲಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿದ್ದೇನೆ.

ಪಾಟೀ ಸವಾಲುಃ ವಾದಿ ಪರ ವಕೀಲರಿಂದಃ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದಂತೆ ನನ್ನ ಉಕ್ತಲೇಖದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಪಿರಿಯಾಪಟ್ಟಣ

**ಸಾಕ್ಷಿಯನ್ನು ದಿಃ24.03.2026 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ವಾದಿ ಪರ ವಕೀಲರಿಂದಃ**

1. ಈ ದಾವೆಯನ್ನು ಯಾರು ಯಾರ ಮೇಲೆ ದಾವೆ ಹಾಕಿದ್ದಾರೆ ಎಂದರೆ ಕೃಷ್ಣನಾಯಕ ರವರ ಮೇಲೆ ಯೋಗೇಶ ಹಾಕಿದ್ದಾರೆ. ವಾದಿಯು ಯಾವ ಕಾರಣಕ್ಕೆ ದಾವೆ ಹಾಕಿದ್ದಾರೆ ಎಂದು ನನಗೆ ಗೊತ್ತಿಲ್ಲ. ಯಾವ ಆಸ್ತಿ ಮೇಲೆ ಹಾಕಿದ್ದಾರೆ ಎಂದರೆ ಮನೆ ಮೇಲೆ ಹಾಕಿದ್ದಾರೆ.
2. ನನಗೆ ಒಬ್ಬಳೇ ಮಗಳು, ಅವರ ಹೆಸರು ಸುಕನ್ಯಾ
3. ಈ ಕೇಸ್ ಬಿಟ್ಟು ಬೇರೆ ಯಾವ ಕೇಸಿನಲ್ಲಿ ಸಾಕ್ಷಿ ಹೇಳಿದ್ದೀರಾ ಎಂದರೆ ನನ್ನ ಮಗಳ ಕೇಸಿನಲ್ಲಿ ಸಾಕ್ಷಿ ಹೇಳಿದ್ದೆ.

4. ಪ್ರತಿವಾದಿ ವಿರುದ್ಧ ನಿಮ್ಮ ಮಗಳು ಸುಕನ್ಯಾ ಒಂದು ಕೇಸ್ ಹಾಕಿದ್ದರು ಎಂದರೆ ಸರಿ. ಸದರಿ ಕೇಸಿನಲ್ಲಿ ನೀವು ಸಾಕ್ಷಿ ಹೇಳಿದ್ದೀರಿ ಎಂದರೆ ಸರಿ. ಸದರಿ ಸಾಕ್ಷಿ ವಿಚಾರಣೆಗೆ ನೀವು ಸಹಿ ಹಾಕಿದ್ದೀರಿ ಎಂದರೆ ಸರಿ.

5. ಸಾಕ್ಷಿಗೆ ಒಂದು ದಾಖಲೆ ತೋರಿಸಿ ಅದರಲ್ಲಿ ನಿಮ್ಮ ಸಹಿ ಇದೆಯಾ ಎಂದರೆ, ನನಗೆ ಗೊತ್ತಾಗುವುದಿಲ್ಲ.

6. ನಿಮ್ಮ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿರುವ ಸಹಿ ಯಾರದು ಎಂದರೆ, ನನಗೆ ಕಾಣಿಸುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದ ವಿಚಾರಗಳ ಬಗ್ಗೆ ನನಗೆ ಗೊತ್ತಿಲ್ಲ.

7. ಈ ದಾವೆಯ ಬಗ್ಗೆ ನಿಮಗೆ ಯಾವುದೇ ವಿಚಾರ ಗೊತ್ತಿಲ್ಲದಿದ್ದರೂ ಪ್ರತಿವಾದಿ ಮಾತು ಕೇಳಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಮರುವಿಚಾರಣೆ: ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದಂತೆ ನನ್ನ ಉಕ್ತಲೇಖದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಪಿರಿಯಾಪಟ್ಟಣ